66

ಕರ್ನಾಟಕ ವಿಧಾನ ಪರಿಷತ್ ಮಾನ್ಯ ಸದಸ್ಯರಾದ ಡಾ: ವೈ.ಎ. ನಾರಾಯಣಸ್ವಾಮಿ ರವರ ನಿಯಮ 72ರಡಿಯಲ್ಲಿ ಮಂಡಿಸಿರುವ ಸೂಚನೆಗೆ ಉತ್ತರ

*******

ಪ್ರಶ್ನೆ: ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಕಾನೂನು ಬಾಹಿರ ಚಟುವಟಿಕೆಗಳನ್ನು ನಡೆಸುತ್ತಿದ್ದು, ಇದರಿಂದಾಗಿ ಬೆಂಗಳೂರಿನ ನಾಗರಿಕರ ನೆಮ್ಮದಿ ಕೆಡಿಸಿರುವ ವಿಷಯದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯಬಯಸುತ್ತೇನೆ.

ಉತ್ತರ: ಬೆಂಗಳೂರು ನಗರದಲ್ಲಿ ವಿದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಿ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾದ ಆರೋಪಿಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ದಾಖಲಿಸಲಾದ ಪ್ರಕರಣಗಳ ಅಂಕಿ-ಅಂಶಗಳ ವಿವರಗಳು ಕೆಳಗಿನಂತಿದೆ.

| ವರ್ಷ | ವಿದೇಶಿಯರ ಮೇಲೆ ದಾಖಲಾಗಿರುವ ಒಟ್ಟು ಪ್ರಕರಣಗಳ ಸಂಖ್ಯೆ | ಎನ್.ಡಿ.ಪಿಎಸ್ (ಡ್ರಗ್ಸ್) ಪ್ರಕರಣಗಳಲ್ಲಿ ವಿದೇಶಿಯರ ವಿರುದ್ಧ ದಾಖಲಿಸಿರುವ ಪ್ರಕರಣಗಳ ಸಂಖ್ಯೆ | ಇತರೆ ಕಾನೂನಿನ ಅಡಿಯಲ್ಲಿ ಭಾಗಿಯಾದ ವಿದೇಶಿಯರ ಪ್ರಕರಣಗಳ ಸಂಖ್ಯೆ |
|---|---|---|---|
| 2020 | 198 | 68 | 130 |
| 2021 | 225 | 143 | 82 |
| 2022 | 184 | 101 | 83 |
| 2023 (ಜೂನ್) | 42 | 30 | 12 |
| ಒಟ್ಟು | 649 | 342 | 307 |

**ವಿದೇಶಿ ಪ್ರಜೆಗಳು ಅಕ್ರಮವಾಗಿ ನೆಲೆಸಿ ಕಾನೂನುಬಾಹಿರ ಕೃತ್ಯಗಳಲ್ಲಿ ತೊಡಗದಂತೆ ಕೈಗೊಂಡ ಕ್ರಮಗಳು:**

1. ಬೆಂಗಳೂರು ನಗರ ಪೊಲೀಸರು ಮೇಲಿಂದ ಮೇಲೆ ವಿದೇಶಿಯರ ನೆಲೆಗಳ ಮೇಲೆ ದಾಳಿಗಳನ್ನು ಕೈಗೊಂಡು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದ ವಿದೇಶಿಯರ ಮೇಲೆ ಪ್ರಕರಣ ದಾಖಲು ಮಾಡುವುದಲ್ಲದೆ ವೀಸಾ ಮತ್ತು ಪಾಸ್‌ಪೋರ್ಟ್ ಅವಧಿ ಮುಗಿದ ವಿದೇಶಿಯರನ್ನು ಅವರ ದೇಶಕ್ಕೆ ಕಳುಹಿಸಲು ಬಂಧನ ಕೇಂದ್ರದಲ್ಲಿ ಇರಿಸಲಾಗುತ್ತಿದೆ ಹಾಗೂ ಎಫ್.ಆರ್.ಆರ್.ಓ ರವರ ಮೂಲಕ ಸದರಿಯವರ ದೇಶಕ್ಕೆ ವಾಪಸ್ಸು ಕಳುಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
2. ವಿದೇಶಿ ಪ್ರಜೆಗಳಿಗೆ ಮನೆ ಬಾಡಿಗೆ ನೀಡುವ ಮಾಲೀಕರುಗಳಿಗೆ ಸದರಿಯವರುಗಳ ಮಾಹಿತಿಯನ್ನು ಕಡ್ಡಾಯವಾಗಿ ಸರಹದ್ದಿನ ಪೊಲೀಸ್ ಠಾಣೆಗಳಿಗೆ ನೀಡಲು ಸೂಚಿಸಿ ಕ್ರಮಕೈಗೊಳ್ಳಲಾಗುತ್ತಿದೆ.
3. ಸಾರ್ವಜನಿಕರಿಂದ ಮಾದಕ ವಸ್ತುಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ಸಂಗ್ರಹಿಸಲು ಟೋಲ್ ಫ್ರೀ ಸಂಖ್ಯೆ: 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.
4. ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಮಾದಕ ವಸ್ತುಗಳ ಮಾರಾಟ/ಸೇವನೆಯ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಸದರಿ ಪ್ರಕರಣಗಳಲ್ಲಿ ಭಾಗಿಯಾದ ವಿದೇಶಿಯರಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿದೆ ಎಂಬುದರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.

5. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ.
6. ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಭಾಗಿಯಾದ ಮೂರು ಜನ ವಿದೇಶಿಯರ ವಿರುದ್ಧ (PIT-NDPS (Prevention of Illicit Traffic Drugs and Psychotropic Substances Act) ಅಡಿಯಲ್ಲಿ ಬಂಧನದ ಆದೇಶ ಮಾಡಲಾಗಿದೆ.
7. ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗುತ್ತಿದೆ.
8. ಶಾಲಾ/ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಿಗೆ ಭೇಟಿ ನೀಡಿ ಅರಿವು ಮೂಡಿಸುವ ಕಾರ್ಯಕ್ರಮ ಮತ್ತು ವಿದೇಶಿ ಪ್ರಜೆಗಳೊಂದಿಗೆ ಸಭೆ ನಡೆಸಿ, ಇಂತಹ ಕಾನೂನು ಬಾಹಿರ ಕೃತ್ಯಗಳಲ್ಲಿ ತೊಡಗದಂತೆ ಎಚ್ಚರಿಕೆ ನೀಡಿ ಈ ನೆಲದ ಕಾನೂನಿಗೆ ಗೌರವ ನೀಡಿ, ಸಹಬಾಳ್ವೆ ನಡೆಸುವ ಕುರಿತು ತಿಳುವಳಿಕೆ ನೀಡಲಾಗುತ್ತಿದೆ.

**ಸಂಖ್ಯೆ: ಒಇ 313 ಪಿಎಂಎಸ್ 2023**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು